# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6ಎ)ಪಿಆರ್/ಇ-23537/22-23

ಮುಖ್ಯ ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 07/11/2022.

**ಕಛೇರಿ ಆದೇಶ**

ವಿಷಯ: ಶ್ರೀ ಶ್ರೀನಿಧಿ, ಪರಿಸರ ಅಭಿಯಂತರರು ರವರನ್ನು ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸುವ ಬಗ್ಗೆ.

ಉಲ್ಲೇಖ: 1) ಅಪರ ನಿಬಂಧಕರು, ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ಪತ್ರ ಸಂಖ್ಯೆ: ಲೋಕ್/ಬಿಸಿಡಿ/161/ಎಆರ್.ಇ-1 ದಿನಾಂಕ: 29-08-2022ರ ತಿಳುವಳಿಕೆ ಪತ್ರ.
2) ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ನಡವಳಿ ಆದೇಶ ಸಂಖ್ಯೆ: ನಅಇ 142 ಎಂ.ಎನ್.ಯು 2021, ದಿನಾಂಕ: 07-01-2022

----------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀ ಶ್ರೀನಿಧಿ, ಪರಿಸರ ಅಭಿಯಂತರರು, ಪೌರಾಡಳಿತ ಇಲಾಖೆಯಿಂದ ಎರವಲು ಸೇವೆಯ ಮೇಲೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಅಧೀಕ್ಷಕ ಅಭಿಯಂತರರು (ಮಹದೇವಪುರ) ಕಛೇರಿಯಲ್ಲಿ ವೇತನ ಪಡೆದು, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ-ಕೆ.ಆರ್.ಪುರ) ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಇವರ ನಿಯೋಜನಾ ಅವಧಿಯು ಮುಕ್ತಾಯಗೊಂಡಿರುವುದರಿಂದ, ಉಲ್ಲೇಖ-(2)ರ ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ನಡವಳಿ ಆದೇಶದಂತೆ ಸದರಿಯವರನ್ನು ಈ ಕೆಳಕಂಡ ಷರತ್ತಿಗೊಳಪಡಿಸಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸಿ, ಮಾತೃ ಇಲಾಖೆಯಾದ ಪೌರಾಡಳಿತ ಇಲಾಖೆಗೆ ಹಿಂದಿರುಗಿಸಿ ಆದೇಶಿಸಿದೆ.

**ಷರತ್ತುಗಳು:-**

1. ಸದರಿ ಅಭಿಯಂತರರು ನಗರ ಪಾಲಿಕೆಯ ಸೇವಾ ಅವಧಿಯಲ್ಲಿ ನಗರ ಪಾಲಿಕೆಗೆ ಯಾವುದೇ ಆರ್ಥಿಕ ಬಾಕಿಯನ್ನು ಉಳಿಸಿಕೊಂಡಿದ್ದಲ್ಲಿ ಸದರಿಯವರಿಂದ ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ.
2. ಸದರಿ ಅಭಿಯಂತರರ ವಿರುದ್ಧ ಇಲಾಖಾ ವಿಚಾರಣೆ ಬಾಕಿ ಇದ್ದಲ್ಲಿ ನಿಯಮಾನುಸಾರ ಕ್ರಮಜರುಗಿಸುವ ಷರತ್ತಿಗೊಳಪಡಿಸಿದೆ.
3. ಪಾಲಿಕೆಯ ಹಿಂದಿನ ವರ್ಷಗಳ ಆಡಿಟ್ ವರದಿಗಳಲ್ಲಿ ಯಾವುದೇ ಆರ್ಥಿಕ ಬಾಕಿಯನ್ನು ಸದರಿಯವರಿಂದ ವಸೂಲಾತಿ ಮಾಡಲು ಸೂಚಿಸಿದಲ್ಲಿ, ಅಂತಹ ಮೊತ್ತವನ್ನು ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಅವುಗಳಿಗೆ ಸಮರ್ಪಕ ಉತ್ತರ ನೀಡುವ ಷರತ್ತು ವಿಧಿಸಿದೆ.
4. ಸದರಿ ಅಭಿಯಂತರರು ನಗರ ಪಾಲಿಕೆಯ ವಸತಿಗೃಹದಲ್ಲಿ ವಾಸಿಸುತ್ತಿದ್ದಲ್ಲಿ ಕೂಡಲೇ ತೆರವುಗೊಳಿಸುವ ಷರತ್ತಿಗೊಳಪಡಿಸಿದೆ.
5. ವಾಕಿ ಟಾಕಿ, ಮೊಬೈಲ್ ಫೋನ್, ಸಿಮ್‌ಕಾರ್ಡ್, ಹೆಲ್ತ್‌ಕಾರ್ಡ್, ಗುರುತಿನಚೀಟಿ (Identity Card) ಹಾಗೂ ಲ್ಯಾಪ್ ಟಾಪ್‌ಗಳನ್ನು ಪಾಲಿಕೆಯಿಂದ ಪಡೆದಿದ್ದಲ್ಲಿ ಇವುಗಳನ್ನು ಪಾಲಿಕೆಗೆ ಹಿಂದಿರುಗಿಸುವ ಷರತ್ತಿಗೊಳಪಡಿಸಿದೆ.

ಮೇಲ್ಕಂಡ ಆದೇಶದನ್ವಯ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು ಸದರಿ ಅಭಿಯಂತರರನ್ನು ಕೂಡಲೇ ಕರ್ತವ್ಯದಿಂದ ಬಿಡುಗಡೆಗೊಳಿಸಿ, ಬಿಡುಗಡೆ ಆದೇಶದ ಪ್ರತಿಯನ್ನು ಈ ಕಛೇರಿಗೆ ಸಲ್ಲಿಸಲು ಸೂಚಿಸಿದೆ.

7/11/22

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ
ಆದೇಶದ ಮೇರೆಗೆ)

7/11/2022 7/11/22

**ಪ್ರತಿಯನ್ನು:**

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಕಾರ್ಯಾಲಯಕ್ಕೆ ಕಳುಹಿಸಿದೆ.
: ವಿಶೇಷ ಆಯುಕ್ತರು (ಯೋಜನೆ) / ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಸರ್ಕಾರದ ಅಧೀನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ರವರಿಗೆ ಕಳುಹಿಸಿದೆ
: ಮಾನ್ಯ ವಲಯ ಆಯುಕ್ತರು, ಮಹದೇವಪುರ ವಲಯ / ಜಂಟಿ ಆಯುಕ್ತರು (ಮಹದೇವಪುರ) ರವರಿಗೆ ಕಳುಹಿಸಿದೆ.
: ಜಂಟಿ ಆಯುಕ್ತರು (ಘನತ್ಯಾಜ್ಯ ನಿರ್ವಹಣೆ) ಬಿ.ಬಿ.ಎಂ.ಪಿ ರವರಿಗೆ ಕಳುಹಿಸಿದೆ.
: ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ರವರಿಗೆ ಕಳುಹಿಸಿದೆ.
: ಮುಖ್ಯ ಅಭಿಯಂತರರು (ಮಹದೇವಪುರ) ವಲಯ ರವರಿಗೆ ಕಳುಹಿಸಿದೆ.
: ಅಧೀಕ್ಷಕ ಅಭಿಯಂತರರು (ಮಹದೇವಪುರ) ವಲಯ ರವರಿಗೆ ಕಳುಹಿಸಿದೆ.
: ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ-ಕೆ.ಆರ್.ಪುರ) ರವರಿಗೆ ಕಳುಹಿಸಿದೆ.
: ಮುಖ್ಯ ಲೆಕ್ಕಾಧಿಕಾರಿ / ಮುಖ್ಯ ಲೆಕ್ಕ ಪರಿಶೋಧಕರು ರವರಿಗೆ ಕಳುಹಿಸಿದೆ.
: ಉಪ ನಿಯಂತ್ರಕರು (ಹಣಕಾಸು-ಕೇಂದ್ರ) ರವರಿಗೆ ಕಳುಹಿಸಿದೆ/ಉ.ನಿ (ಹಣಕಾಸು-ಮಹದೇವಪುರ) ರವರಿಗೆ ಕಳುಹಸಿದೆ.
: ಸಂಬಂಧಪಟ್ಟ ಅಭಿಯಂತರರಿಗೆ / ಕಛೇರಿ ಪ್ರತಿ.
: ಉಪ ಮುಖ್ಯ ಮಾಹಿತಿ ಅಧಿಕಾರಿ, ಬಿ.ಬಿ.ಎಂ.ಪಿಗೆ ರವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.